MAY 16, 2026

**AKASHAVANI - DHARWAD**

**PRADESH SAMACHARA (KANNADA) 12.00 P.M.**

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

<><><>

**ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ** ರಾಜ್ಯ ಸರ್ಕಾರ, ಈ ತಿಂಗಳ 20 ರಂದು ಮೂರು ವರ್ಷಗಳನ್ನು ಪೂರ್ಣಗೊಳಿಸಲಿದೆ. ಈ ಹಿನ್ನೆಲೆ, ತುಮಕೂರಿನಲ್ಲಿ 19 ರಂದು ಸಾರ್ಥಕ ಸೇವೆಗಳ ಸಮರ್ಪಣೆ ಕಾರ್ಯಕ್ರಮ ಆಯೋಜಿಸಲಾಗಿದ್ದು, ಮುಖ್ಯಮಂತ್ರಿಯವರು ಪಾಲ್ಗೊಳ್ಳಲಿದ್ದಾರೆ ಎಂದು ಗೃಹ ಖಾತೆ ಸಚಿವ ಡಾಕ್ಟರ ಜಿ.ಪರಮೇಶ್ವರ ತಿಳಿಸಿದ್ದಾರೆ. ತಮ್ಮ ಎಕ್ಸ್ ಖಾತೆ ಮೂಲಕ ಮಾಹಿತಿ ಹಂಚಿಕೊಂಡಿರುವ ಸಚಿವರು, ಕಾರ್ಯಕ್ರಮದಲ್ಲಿ ಒಟ್ಟು 1 ಲಕ್ಷ, 52 ಸಾವಿರದ 492 ಫಲಾನುಭವಿಗಳಿಗೆ ಭೂ ಹಕ್ಕು ಪತ್ರ ವಿತರಿಸಲಾಗುವುದು, ಜಿಲ್ಲೆಯಲ್ಲಿ ಸುಮಾರು 682 ಕೋಟಿ ರೂಪಾಯಿಗಳ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಮುಖ್ಯಮಂತ್ರಿಯವರು ಶಂಕುಸ್ಥಾಪನೆ ನೆರವೇರಿಸಲಿದ್ದಾರೆ ಎಂದರು.

<><><>

**ದಾಸ ಸಾಹಿತ್ಯ ಹಾಗೂ ವಚನ ಸಾಹಿತ್ಯ** ಅನೇಕ ಭಾ ಗಳಿಗೆ ತರ್ಜುಮೆಯಾಗಿದೆ. ದಾಸ ಸಾಹಿತ್ಯವು ವಿವಿಧೆಡೆ ಪ್ರಚಾರವಾಗುತ್ತಿರುವುದು ಶ್ಲಾಘನೀಯ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು. ಬೆಂಗಳೂರು, ಮಲ್ಲತ್ತಹಳ್ಳಿ ಕಲಾಗ್ರಾಮದಲ್ಲಿ ಆಯೋಜಿತ ಕಾರ್ಯಕ್ರಮದಲ್ಲಿ, ಕನಕದಾಸರ ಸಮಗ್ರ ಸಾಹಿತ್ಯ, ಅನುವಾದ ಸಂಪುಟಗಳ 40 ಕೃತಿಗಳ ಬಿಡುಗಡೆ ಹಾಗೂ ಕನಕ ಶಿಲ್ಪವನವನ್ನು ಲೋಕಾರ್ಪಣೆಗೊಳಿಸಿ ಅವರು ಮಾತನಾಡಿದರು. ಕನಕದಾಸರು ಭಕ್ತಿ ಪಂಥದ ಕವಿಯ ್ಟೇ ಅಲ್ಲದೇ, ಸಮಾಜದ ಅಂಕುಡೊಂಡುಗಳನ್ನು ತಿದ್ದಿದ ಸಮಾಜ ಸುಧಾರಕರು ಎಂದು ಬಣ್ಣಿಸಿದರು.

<><><>

**ಜಗತ್ತಿನಾದ್ಯಂತ ಎಲ್ಲ ರಾಷ್ಟ್ರಗಳು ಅನಿರೀಕ್ಷಿತ** ಇಂಧನ ಬಿಕ್ಕಟ್ಟು ಎದುರಿಸುತ್ತಿವೆ. ಜಾಗತಿಕವಾಗಿ ಇಂಧನ ಪೂರೈಕೆ ಹಾಗೂ ತೈಲ ಆಮದು ಮಾಡಿಕೊಳ್ಳುವ ದೇಶಗಳು ತೀವ್ರ ಒತ್ತಡದಲ್ಲಿವೆ. ಇದರ ಹೊರತಾಗಿಯೂ ಭಾರತ ಅತ್ಯಂತ ಕಡಿಮೆ ಮಟ್ಟದಲ್ಲಿ ಬೆಲೆ ಏರಿಕೆ ಮಾಡಿದೆ ಎಂದು ಕೇಂದ್ರ ಗ್ರಾಹಕ ವ್ಯವಹಾರಗಳ ಖಾತೆ ಸಚಿವ ಪ್ರಲ್ಹಾದ್ ಜೋಶಿ ತಮ್ಮ ಎಕ್ಸ್ ಖಾತೆ ಮೂಲಕ ತಿಳಿಸಿದ್ದಾರೆ. ಕರ್ನಾಟಕ ರಾಜ್ಯ ಸರ್ಕಾರ, ಇಂಧನ ತೆರಿಗೆಯನ್ನು ಈ ಹಿಂದೆ ಎರಡೆರಡು ಬಾರಿ ಏಕೆ ಹೆಚ್ಚಿಸಿದೆ ಎಂಬುದನ್ನು ವಿವರಿಸಲಿ ಅವರು ಆಗ್ರಹಿಸಿದ್ದಾರೆ.

<><><>

**ವಿಜಯನಗರ ಜಿಲ್ಲಾ ಪೊಲೀಸ್ ವತಿಯಿಂದ,** ಮನೆ ಕಳ್ಳತನ ತಡೆಗಟ್ಟುವ ನಿಟ್ಟಿನಲ್ಲಿ 'ಲಾಕ್ಡ್ ಹೌಸ್ ಬೀಟ್ ಸಿಸ್ಟಮ್' ಎಂಬ ನೂತನ ಸುರಕ್ಷತಾ ಉಪಕ್ರಮ ಆರಂಭಿಸಲಾಗಿದೆ. ಕುಟುಂಬ ಸಹಿತ ಹೊರ ಹೋಗುವ ಸಂದರ್ಭ, ಮನೆಯ ಸುರಕ್ಷತೆ

ಖಾತ್ರಿಪಡಿಸುವ ನಿಟ್ಟಿನಲ್ಲಿ ಈ ಯೋಜನೆ ಜಾರಿಗೆ ತರಲಾಗಿದೆ ಎಂದು, ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಸ್. ಜಾಹ್ನವಿ

<><><>

**ಎಸ್. ಜಾಹ್ನವಿ ಧ್ವನಿ- 40 ಸೆಕೆಂದುಗಳು**

<><><>

**ಇಂದು ರಾಷ್ಟ್ರೀಯ** ಡೆಂಘಿ ಜಾಗ್ರತಿ ದಿನ. 'ಡೆಂಘಿ ತಡೆಗಟ್ಟುವಲ್ಲಿ ಸಮುದಾಯದ ಸಹಭಾಗಿತ್ವ; ಗುರುತಿಸಿ, ಸ್ವಚ್ಛಗೊಳಿಸಿ ಹಾಗೂ ಸುರಕ್ಷಿತವಾಗಿರಿ' ಎಂಬ ಘೋಷವಾಕ್ಯದೊಂದಿಗೆ ಈ ದಿನವನ್ನು ಆಚರಿಸಲಾಗುತ್ತಿದೆ. ಡೆಂಘಿ ಸಾಂಕ್ರಾಮಿಕವನ್ನು ತಡೆಗಟ್ಟುವ ನಿಟ್ಟಿನಲ್ಲಿ, ಮುಂಗಾರು ಪೂರ್ವದಲ್ಲಿ, ನಾಗರಿಕರು ಹಾಗೂ ಸ್ಥಳೀಯಾಡಳಿತ ಅಧಿಕಾರಿಗಳ ನೇತೃತ್ವದಲ್ಲಿ ಸೊಳ್ಳೆ ಉತ್ಪತ್ತಿ ಕೇಂದ್ರಗಳನ್ನು ಗುರುತಿಸಿ, ನಾಶಪಡಿಸುವ ಗುರಿಯನ್ನು ಹೊಂದಲಾಗಿದೆ.

<><><>

**ಸವದತ್ತಿ ಯಲ್ಲಮ್ಮ ಮತಕ್ಷೇತ್ರದ ರೈತರ** ಹಿತದೃಷ್ಟಿಯಿಂದ, ಬೆಂಗಳೂರಿನ ನೀರಾವರಿ ನಿಗಮದ ಕಚೇರಿಯಲ್ಲಿ ಹಿರಿಯ ಅಧಿಕಾರಿಗಳೊಂದಿಗೆ ಮಹತ್ವದ ಸಭೆ ನಡೆಸಲಾಗಿದೆ ಎಂದು ಶಾಸಕ ವಿಶ್ವಾಸ ವೈದ್ಯ ತಿಳಿಸಿದ್ದಾರೆ. ಸಾಮಾಜಿಕ ಮಾಧ್ಯಮದ ಮೂಲಕ ಮಾಹಿತಿ ಹಂಚಿಕೊಂಡಿರುವ ಅವರು, ಯೋಜನೆಗಳ ಅನುಷ್ಠಾನದಲ್ಲಿ ಎದುರಾಗಿರುವ ತಾಂತ್ರಿಕ ಅಡೆತಡೆಗಳನ್ನು ನಿವಾರಿಸಿ, ಕಾಮಗಾರಿಗಳಿಗೆ ವೇಗ ನೀಡುವಂತೆ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದರು. ಕೃಷಿ ಚಟುವಟಿಕೆಗಳಿಗೆ ಪೂರಕವಾಗಿ ನೀರಾವರಿ ಸೌಲಭ್ಯಗಳನ್ನು ಬಲಪಡಿಸುವುದು ಹಾಗೂ ಸಕಾಲಕ್ಕೆ ರೈತರಿಗೆ ನೀರು ಪೂರೈಕೆ ಮಾಡುವುದು ತಮ್ಮ ಮುಖ್ಯ ಗುರಿಯಾಗಿದೆ ಎಂದು ತಿಳಿಸಿದ್ದಾರೆ.

<><><>

**ಧಾರವಾಡ ನಗರದ ಕೃಷಿ ವಿಶ್ವವಿದ್ಯಾಲಯದಲ್ಲಿ,** ಇಕೋ ವಾಚ್ ವತಿಯಿಂದ ಆಯೋಜಿತ, 'ದಕ್ಷಿಣ ಭಾರತದ ಕೃಷಿ ಮತ್ತು ಆರ್ಥಿಕತೆ ಮೇಲೆ, ಪಶ್ಚಿಮ ಘಟ್ಟದ ಪ್ರಭಾವ ಹಾಗೂ ಪರಿಣಾಮ' ಕುರಿತ ರಾಷ್ಟ್ರೀಯ ವಿಚಾರ ಸಂಕಿರಣವನ್ನು ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ ಪ್ರಧಾನ ಕಾರ್ಯದರ್ಶಿ ಶ್ರೀನಿವಾಸಲು ಉದ್ಘಾಟಿಸಿ, ಮಾತನಾಡಿದರು. ಪಶ್ಚಿಮ ಘಟ್ಟ ಪ್ರದೇಶದ ಮರ, ತೊಗಟೆ, ಸಸ್ಯಗಳಿಂದ ಔಷಧ ತಯಾರಿಸಲಾಗುತ್ತಿದೆ. ಶೇಕಡ 25 ರಷ್ಟು ಆಧುನಿಕ ಔಷಧಗಳ ಮೂಲ ಪಶ್ಚಿಮ ಘಟ್ಟವಾಗಿದೆ ಎಂದರು.

<><><>

**ಯುವಜನರಲ್ಲಿ ಶಿಸ್ತು, ನಾಯಕತ್ವ** ಹಾಗೂ ಸೇವಾ ಮನೋಭಾವ ಬೆಳೆಸುವಲ್ಲಿ, ಭಾರತ್ ಸ್ಕೌಟ್ಸ್ ಅಂಡ್ ಗೈಡ್ಸ್ ಪಾತ್ರ ಮಹತ್ವದ್ದಾಗಿದೆ ಎಂದು, ಬೀದರ ಜಿಲ್ಲಾ ಉಸ್ತುವಾರಿ ಸಚಿವ, ಈಶ್ವರ ಖಂಡ್ರೆ, ಶ್ಲಾಘಿಸಿದ್ದಾರೆ. ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಅನುದಾನದಡಿ, ಬೀದರ್ ನಲ್ಲಿ ನೂತನವಾಗಿ ನಿರ್ಮಾಣಗೊಂಡ, ಸ್ಕೌಟ್ಸ್ ಆಂಡ್ ಗೈಡ್ಸ್ ಭವನ ಉದ್ಘಾಟಿಸಿ, ಅವರು ಮಾತನಾಡಿದರು. ನಾಡೋಜ ಡಾಕ್ಟರ್ ಬಸವಲಿಂಗ ಪಟ್ಟದೇವರು, ಭಾರತ್ ಸ್ಕೌಟ್ಸ್ ಆಂಡ್ ಗೈಡ್ಸ್ ಆಯುಕ್ತ, ಪಿ.ಜಿ.ಆರ್. ಸಿಂಧಿಯಾ ಸೇರಿದಂತೆ, ಗಣ್ಯರು ಉಪಸ್ಥಿತರಿದ್ದರು.

<><><>

**ಬಳ್ಳಾರಿ ರೈಲು ನಿಲ್ದಾಣದ ಮೇಲ್ದರ್ಜೆ,** ರೇಲ್ವೆ ಮೇಲ್ಸೇತುವೆ ನಿರ್ಮಾಣ ಸೇರಿದಂತೆ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಸಂಸದ ಇ. ತುಕಾರಾಂ ಅವರು ಪರಿಶೀಲಿಸಿದರು. ಹುಬ್ಬಳ್ಳಿ ನೈಋತ್ಯ ರೇಲ್ವೆ ವಲಯದ ಪ್ರಧಾನ ವ್ಯವಸ್ಥಾಪಕ ಪಿ. ಅನಂತ್ ಇದ್ದರು.

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

<><><>

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ**

<><><>